ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 10/07/2019

# ಶಾಸಕರಿಗೆ ಸ್ಪೀಕರ್ ಬುಲಾವ್

## 8 ಮಂದಿ ಶಾಸಕರ ರಾಜೀನಾಮೆ ಕ್ರಮಬದ್ಧವಲ್ಲ

ಬೆಂಗಳೂರು: ಒಟ್ಟು 8 ಮಂದಿ ಶಾಸಕರ ರಾಜೀನಾಮೆ ಕ್ರಮ ಬದ್ಧವಾಗಿಲ್ಲ. ಕ್ರಮ ಬದ್ಧವಾಗಿ ರಾಜೀನಾಮೆ ನೀಡಿದ ಐವರಿಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದೇನೆ ಎಂದು ಸ್ಪೀಕರ್ ರಮೇಶ್‌ಕುಮಾರ್ ಹೇಳಿದ್ದಾರೆ.

ಮಂಗಳವಾರ ತಮ್ಮ ಕಚೇರಿಗೆ ಆಗಮಿಸಿ 13 ಮಂದಿ ಅತೃಪ್ತ ಶಾಸಕರ ರಾಜೀನಾಮೆ ಪತ್ರ ಪರಿಶೀಲಿಸಿದ ನಂತರ ಸುದ್ದಿಗಾರರ ಜತೆ ಮಾತನಾಡಿದ ಅವರು ಆನಂದ್ ಸಿಂಗ್, ರಾಮಲಿಂಗಾರೆಡ್ಡಿ, ಕೆಸಿ ನಾರಾಯಣಗೌಡ, ಪ್ರತಾಪಗೌಡ ಪಾಟೀಲ, ಕೆ.ಗೋಪಾಲಯ್ಯ ಅವರ ರಾಜೀನಾಮೆ ಪತ್ರ ಕ್ರಮಬದ್ಧವಾಗಿದೆ. ಆನಂದ್ ಸಿಂಗ್. ಕೆ.ಗೋಪಾಲಯ್ಯ ಹಾಗೂ ಕೆಸಿ ನಾರಾಯಣಗೌಡ ಅವರಿಗೆ ಜುಲೈ 12ರಂದು ವೈಯಕ್ತಿಕ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದೇನೆ. ಜುಲೈ 15ರಂದು ರಾಮಲಿಂಗಾರೆಡ್ಡಿ ಹಾಗೂ ಪ್ರತಾಪಗೌಡ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದೇನೆ. ಉಳಿದ 8 ಮಂದಿ ಶಾಸಕರ ರಾಜೀನಾಮೆ ಪತ್ರ ಕ್ರಮಬದ್ಧವಾಗಿಲ್ಲ. ನಿಯಮಾನುಸಾರ ಕ್ರಮಬದ್ಧವಾಗಿ ರಾಜೀನಾಮೆ ನೀಡುವಂತೆ ಸೂಚಿಸಿದ್ದೇನೆ ಎಂದು ಸ್ಪೀಕರ್ ಹೇಳಿದರು.

ರೋಷನ್‌ಬೇಗ್ ರಾಜೀನಾಮೆ ನೀಡಿದ್ದಾರೆ. ಅದನ್ನು ಸಚಿವಾಲಯದ ಅಧಿಕಾರಿಗಳು ಪರಿಶೀಲನೆ ಮಾಡುತ್ತಿದ್ದಾರೆ ಎಂದು ತಿಳಿಸಿದ ಸ್ಪೀಕರ್ ಬಂಡಾಯ ಶಾಸಕರನ್ನು ಅನರ್ಹಗೊಳಿಸುವಂತೆ ಕಾಂಗ್ರೆಸ್ ಪಕ್ಷ ಮನವಿ ಮಾಡಿದೆ. ಅದನ್ನು ಪರಿಶೀಲಿಸಲಾಗುತ್ತಿದೆ ಎಂದರು.

ಜುಲೈ 6ರಂದು ಮಧ್ಯಾಹ್ನದವರೆಗೂ ನಾನು ಕಚೇರಿಯಲ್ಲಿದ್ದೆ. ಆ ನಂತರ 13 ಮಂದಿ ಶಾಸಕರು ನನ್ನ ಕಚೇರಿಗೆ ಬಂದಿದ್ದರು. ಆಗ ನಾನು ಕಚೇರಿಯಿಂದ ಹೊರಗೆ ಹೋಗಿದ್ದೆ. ನಾನು ಪಾರದರ್ಶಕವಾಗಿ, ಸಂವಿಧಾನದ ಆಶಯದಂತೆ ಕೆಲಸ ಮಾಡುತ್ತಿದ್ದೇನೆ. ನಾನು ಏನನ್ನೂ ಮುಚ್ಚಿಟ್ಟಿಲ್ಲ. ನನಗೆ ರಾಜೀನಾಮೆ ನೀಡಿದವರು ರಾಜ್ಯಪಾಲರನ್ನು ಭೇಟಿಯಾಗಿ ರಾಜೀನಾಮೆ ನೀಡಿದ್ದಾರೆ. ಈ ಬಗ್ಗೆ ಸಂವಿಧಾನದ ಪ್ರಕಾರ ಕ್ರಮ ಕೈಗೊಳ್ಳಿ ಎಂದು ರಾಜ್ಯಪಾಲರು ಪತ್ರ ಬರೆದು ಸೂಚಿಸಿದ್ದಾರೆ. ನಾನು ಸಂವಿಧಾನದ ಆಶಯದಂತೆ ಕ್ರಮ ಕೈಗೊಳ್ಳುತ್ತೇನೆ ಎಂದು ಹೇಳಿದರು.

## 5 ಮಂದಿಗೆ ವಿಚಾರಣೆಗೆ ಹಾಜರಾಗಲು ಸೂಚನೆ

### ಸುಗಂಧ ಹೇಗೆ ಬರುತ್ತೆ?

ಸ್ಪೀಕರ್ ರಮೇಶ್ ಕುಮಾರ್ ಮಂಗಳವಾರ ಬೆಳಿಗ್ಗೆ ತಮ್ಮ ನಿವಾಸದಿಂದ ವಿಧಾನಸೌಧದ ಕಚೇರಿಗೆ ಹೋಗುವ ಮುನ್ನ ಪ್ರಸ್ತುತ ರಾಜಕಾರಣದ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಸ್ಲಂನಲ್ಲಿ ವಾಸವಿರುವವರಿಗೆ ಸುಗಂಧ ಹೇಗೆ ಬರುತ್ತದೆ. ಇಂದಿನ ರಾಜಕಾರಣ ನೋಡಿದರೆ ಬೇಸರವಾಗುತ್ತದೆ ಎಂದು ಹೇಳಿದರು.

ನಾನು ಇಂದು ಕಚೇರಿಯಲ್ಲಿಯೇ ಇರುತ್ತೇನೆ. ಯಾವುದೇ ಶಾಸಕರು ಬಂದು ನನಗೆ ರಾಜೀನಾಮೆ ನೀಡಬಹುದು. ರಾಜೀನಾಮೆ ಕೊಟ್ಟ ಶಾಸಕರ ಬಗ್ಗೆ ಕ್ಷೇತ್ರದ ಜನರೂ ದೂರು ನೀಡಿದ್ದಾರೆ. ಅದನ್ನು ಸಹ ಪರಿಶೀಲಿಸಬೇಕಾಗುತ್ತದೆ. ಈ ವಿಷಯದಲ್ಲಿ ನಾನು ಪಕ್ಷಾತೀತವಾಗಿ ತೀರ್ಮಾನ ಕೈಗೊಳ್ಳುತ್ತೇನೆ ಎಂದು ಹೇಳಿದರು.



## ವಿಧಾನಸೌಧದಲ್ಲಿ ಬಿರುಸಿನ ಚಟುವಟಿಕೆ

- ರಾಜೀನಾಮೆ ಪರಿಶೀಲಿಸಿದ ಸ್ಪೀಕರ್
- ಸ್ಪೀಕರ್ ಜತೆ ಕೈ ಮುಖಂಡರ ಸಮಾಲೋಚನೆ
- ಸ್ಪೀಕರ್ ಸಿಗದೇ ಹಿಂದಿರುಗಿದ ಬಿಜೆಪಿ ನಿಯೋಗ



ಬೆಂಗಳೂರು: ಮಂಗಳವಾರ ವಿಧಾನಸೌಧದ ಸ್ಪೀಕರ್ ಕಚೇರಿ ರಾಜಕೀಯ ಚಟುವಟಿಕೆ ತಾಣವಾಗಿತ್ತು. ರಾಜೀನಾಮೆ ನೀಡಿದ 13 ಮಂದಿ ಶಾಸಕರ ಬಗ್ಗೆ ಅವರು ಕೈಗೊಳ್ಳುವ ನಿರ್ಧಾರದ ಬಗ್ಗೆ ರಾಜ್ಯದ ಜನರ ಚಿತ್ತವಿತ್ತು.

ಸುಮಾರು 11.30 ಸುಮಾರಿಗೆ ಸ್ಪೀಕರ್ ರಮೇಶ್‌ಕುಮಾರ್ ಕಚೇರಿಗೆ ಆಗಮಿಸಿದರು. ತಕ್ಷಣವೇ ಕಾರ್ಯದರ್ಶಿಯವರಿಂದ ಶಾಸಕರ ರಾಜೀನಾಮೆ ಪತ್ರವನ್ನು ತರಿಸಿಕೊಂಡು ಅದರ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ವಿಧಾನಸೌಧದ ಮೂರನೇ ಮಹಡಿಯಲ್ಲಿ ಕಾಂಗ್ರೆಸ್ ಶಾಸಕಾಂಗ ಸಭೆ ಮುಗಿಯುವ ಹಂತಕ್ಕೆ ಬಂದಿತ್ತು. ಸ್ವಲ್ಪ ಹೊತ್ತಿಗೆ ಸಚಿವರಾದ ಕೆಜೆ ಜಾರ್ಜ್, ಕೃಷ್ಣಭೈರೇಗೌಡ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಸ್ಪೀಕರ್ ಕಚೇರಿಗೆ ಆಗಮಿಸಿದರು. ಶಾಸಕರ ರಾಜೀನಾಮೆ ಬಗ್ಗೆ ಸುಮಾರು 1 ಗಂಟೆಗಳ ಕಾಲ ಚರ್ಚಿಸಿದರು. ತಮ್ಮ ಪಕ್ಷದ 8 ಮಂದಿ ಶಾಸಕರು ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿದ್ದು ಅವರನ್ನು ಅನರ್ಹಗೊಳಿಸುವ ಮೂಲಕ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಸ್ಪೀಕರ್ ಅವರ ಅಹವಾಲುಗಳನ್ನು ಶಾಂತಚಿತ್ತದಿಂದ ಕೇಳಿದರು.

ಮಧ್ಯಾಹ್ನ 2.30ರ ಸುಮಾರಿಗೆ ಪತ್ರಿಕಾಗೋಷ್ಠಿ ನಡೆಸಿದ ಸ್ಪೀಕರ್ 13 ಮಂದಿ ಶಾಸಕರ ರಾಜೀನಾಮೆ ಪೈಕಿ 5ಮಂದಿ ಶಾಸಕರ ರಾಜೀನಾಮೆ ಮಾತ್ರ ಕ್ರಮಬದ್ಧವಾಗಿವೆ ಎಂದು ಘೋಷಿಸಿದರು. ಇದು ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿತು. ಮಧ್ಯಾಹ್ನದ ನಂತರ ಮಾಜಿ ಸಚಿವ ಅರವಿಂದ ಲಿಂಬಾವಳಿ ನೇತೃತ್ವದ ಬಿಜೆಪಿ ನಿಯೋಗ ಸ್ಪೀಕರ್ ಅವರನ್ನು ಭೇಟಿ ಮಾಡಿ ಶಾಸಕರ ರಾಜೀನಾಮೆ ಕುರಿತು ಚರ್ಚಿಸಲು ಮುಂದಾಯಿತು. ಆದರೆ ಆಗ ಸ್ಪೀಕರ್ ಕಚೇರಿಯಲ್ಲಿ ಇರಲಿಲ್ಲ. ಕಾದು ಕುಳಿತ ಬಿಜೆಪಿ ನಿಯೋಗ ಸ್ಪೀಕರ್ ಭೇಟಿ ಆಗದೇ ಹಿಂದಿರುಗಿತು.

ಮಧ್ಯಾಹ್ನ 1 ಗಂಟೆ ಸುಮಾರಿಗೆ ಸ್ಪೀಕರ್ ಕಚೇರಿಗೆ ಆಗಮಿಸಿದ ಮಾಜಿ ಸಚಿವ ಆರ್.ರೋಷನ್‌ಬೇಗ್ ತಮ್ಮ ರಾಜೀನಾಮೆ ಸಲ್ಲಿಸಿ ತಕ್ಷಣ ಅಲ್ಲಿಂದ ತೆರಳಿದರು. ರಾಜಕೀಯ ಚಟುವಟಿಕೆ ಹಿನ್ನೆಲೆಯಲ್ಲಿ ಸ್ಪೀಕರ್ ಕಚೇರಿ ಸುತ್ತ ಬಿಗಿ ಪೊಲೀಸ್ ಪಹರೆ ಇತ್ತು.

## ಬಹುಮತ ಇಲ್ಲದಿದ್ದರೂ ಕಾಂಗ್ರೆಸ್‌ಗೆ ಹೆಚ್ಚಿನ ಮತ

ಬೆಂಗಳೂರು: ಕಳೆದ ವರ್ಷ ನಡೆದ ವಿಧಾನಸಭೆಯಲ್ಲಿ ಬಿಜೆಪಿ ಹೆಚ್ಚು ಸ್ಥಾನಗಳನ್ನು ಗಳಿಸಿದ್ದರೂ ಮತಗಳಿಕೆಯಲ್ಲಿ ಕಾಂಗ್ರೆಸ್ ಪಕ್ಷವೇ ಶೇ. 1ರಷ್ಟು ಹೆಚ್ಚು ಮತಗಳಿಸಿದ್ದು ಜನ ಕಾಂಗ್ರೆಸ್‌ಗೆ ಬೆಂಬಲ ನೀಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2018ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಶೇ.38, ಬಿಜೆಪಿಗೆ 37, ಜೆಡಿಎಸ್‌ಗೆ 19ರಷ್ಟು ಮತಗಳು ಬಿದ್ದಿದ್ದವು. ಬಿಜೆಪಿಗಿಂತಲೂ ಕಾಂಗ್ರೆಸ್ ಶೇ.1ರಷ್ಟು ಮತ ಗಳಿಸಿತ್ತು. ಜೆಡಿಎಸ್-ಕಾಂಗ್ರೆಸ್ ಸೇರಿದಂತೆ ಶೇ.52ರಷ್ಟು ಮತಗಳಿಕೆಯಾಗುತ್ತದೆ. ಇದನ್ನು ಬಿಜೆಪಿಯವರು ತಿಳಿದುಕೊಳ್ಳಬೇಕು ಎಂದರು.

ದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದ ಬಿಜೆಪಿಗೆ ಸರ್ಕಾರ ರಚಿಸಲು ರಾಜ್ಯಪಾಲರು ಅವಕಾಶ ನೀಡಿದ್ದರು. ಯಡಿಯೂರಪ್ಪ ಮುಖ್ಯಮಂತ್ರಿಯಾಗಿಯೂ ಪ್ರಮಾಣ ವಚನ ಸ್ವೀಕರಿಸಿದ್ದರು. ಆದರೆ ಬಹುಮತ ಸಾಬೀತುಪಡಿಸುವಲ್ಲಿ ವಿಫಲರಾದರು. ಅನಂತರ ಕಾಂಗ್ರೆಸ್-ಜೆಡಿಎಸ್ ಪಕ್ಷಗಳು ಒಟ್ಟಾಗಿ ಸಮ್ಮಿಶ್ರ ಸರ್ಕಾರ ರಚಿಸಿವೆ. ಇದು ಎಲ್ಲರಿಗೂ ಗೊತ್ತಿರುವ ವಿಷಯ. ಹೀಗಿದ್ದರೂ ಬಿಜೆಪಿ ಮತ್ತೆ ಮತ್ತೆ ಸರ್ಕಾರ ರಚನೆ ಮಾಡುವ ಯತ್ನ ಮಾಡುತ್ತಲೇ ಇದೆ ಎಂದು ಟೀಕಿಸಿದರು. ಒಂದು ವರ್ಷದ ಅವಧಿಯಲ್ಲಿ ಬಿಜೆಪಿ ಐದು ಬಾರಿ ಸರ್ಕಾರ ಅಸ್ಥಿರಗೊಳಿಸಲು ಪ್ರಯತ್ನಿಸಿ ವಿಫಲವಾಗಿದೆ. ಈ ಬಾರಿ ರಾಜ್ಯ ಬಿಜೆಪಿ ನಾಯಕರ ಜತೆ ಕೇಂದ್ರದ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿ ಸಂವಿಧಾನ ಬಾಹಿರವಾಗಿ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ.